**ದಿನಾಂಕ: 20-06-2017 ರಂದು ಸಂಜೆ: 5.00 ಗಂಟೆಗೆ ಕೊಠಡಿ ಸಂಖ್ಯೆ:313, 3ನೇ ಮಹಡಿ ವಿಧಾನಸೌಧದಲ್ಲಿ ನಡೆದ ಮ್ಯಾನ್ಯುಯಲ್ ಸ್ಕಾವೆಂಜರ್ಸ್ ವೃತ್ತಿ / ಕೆಲಸ ನಿಷೇಧ ಮತ್ತು ಪುನರ್ವಸತಿ ಕಾಯ್ದೆ 2013 ರ ಅನ್ವಯ ರಚಿಸಿರುವ ರಾಜ್ಯ ಮೇಲ್ವಿಚಾರಣಾ ಸಮಿತಿ ಸಭೆಯ ನಡವಳಿಗಳು**

**<u>ಸಭೆಯಲ್ಲಿ ಹಾಜರಿದ್ದವರು:-</u>**

1. ಶ್ರೀ ಹೆಚ್.ಆಂಜನೇಯ
   ಮಾನ್ಯ ಅಧ್ಯಕ್ಷರು ರಾಜ್ಯ ಮೇಲ್ವಿಚಾರಣಾ ಸಮಿತಿ ಹಾಗೂ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು
2. ಶ್ರೀ ಆರ್.ರೋಷನ್ ಬೇಗ್,
   ಸಮಿತಿ ಸದಸ್ಯರು ಮತ್ತು ನಗರಾಭಿವೃದ್ಧಿ ಹಾಗೂ ಹಜ್ ಸಚಿವರು
3. ಶ್ರೀ ಧರ್ಮಸೇನ, ಸಮಿತಿ ಸದಸ್ಯರು ಮತ್ತು ವಿಧಾನಸಭಾ ಪರಿಷತ್ತು ಸದಸ್ಯರು.
4. ಶ್ರೀ ಎಂ.ಆರ್.ವೆಂಕಟೇಶ, ಸಮಿತಿ ಸದಸ್ಯರು ಮತ್ತು ಅಧ್ಯಕ್ಷರು. ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ.
5. ಶ್ರೀ ಎ. ಮುನಿಯಪ್ಪ, ಸಮಿತಿ ಸದಸ್ಯರು ಮತ್ತು ಅಧ್ಯಕ್ಷರು, ಕರ್ನಾಟಕ ರಾಜ್ಯ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ.
6. ಮಹೇಂದ್ರ ಜೈನ್, ಭಾ.ಆ.ಸೇ, ಸಮಿತಿ ಸದಸ್ಯರು ಮತ್ತು ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ
7. ನಾಗಾಂಭಿಕಾ ದೇವಿ, ಭಾ.ಆ.ಸೇ, ಸಮಿತಿ ಸದಸ್ಯರು ಮತ್ತು ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
8. ಶ್ರೀ.ಗೋಪಾಲ್, ಜಂಟಿ ಕಾರ್ಯದರ್ಶಿ, ಸದಸ್ಯ ಕಾರ್ಯದರ್ಶಿ ಮತ್ತು ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಪರವಾಗಿ
9. ಎ.ಎನ್ ರಾಧಮಣಿ, ಅಧೀನ ಕಾರ್ಯದರ್ಶಿ, ಕಾರ್ಮಿಕ ಇಲಾಖೆ (ಸಮಿತಿ ಸದಸ್ಯರು ಮತ್ತು ಅಪರ ಮುಖ್ಯ ಕಾರ್ಯದರ್ಶಿ ಕಾರ್ಮಿಕ ಇಲಾಖೆ ಇವರ ಪರವಾಗಿ)
10. ಎಸ್.ಜಿ ರವೀಂದ್ರ ಭಾ.ಆ.ಸೇ. ವಿಶೇಷ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಮಿತಿ (ಸದಸ್ಯರು ಮತ್ತು ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರ ಪರವಾಗಿ)
11. ಶ್ರೀ.ಜಗದೀಶ್ ಹಿರೇಮಣಿವರ್, ಸದಸ್ಯರು, ರಾಷ್ಟ್ರೀಯ ಸಫಾಯಿ ಕರ್ಮಚಾರಿಗಳ ಆಯೋಗ

12. ಅಪರ್ಣ ಗರ್ಗ್, ಸಮಿತಿ ಸದಸ್ಯರು ಮತ್ತು Additional Divisional Railway Manager, South Western Railway.

13. ಶ್ರೀ ರಾಮಚಂದ್ರ, ಶ್ರೀ ಓಬಳೇಶ್, ಶ್ರೀಮತಿ ಪದ್ಮ, ಶ್ರೀಮತಿ ಪುಷ್ಪ ವೆಂಕಟೇಶ್ ಸದಸ್ಯರುಗಳು ರಾಜ್ಯ ಮೇಲ್ವಿಚಾರಣಾ ಸಮಿತಿ.

14. ಶ್ರೀ ಹೆಚ್.ಕೆ ಸುರೇಶ್, ಸಮಿತಿ ಸದಸ್ಯರು ಮತ್ತು ಸಂಚಾಲಕರು. **SLBC Convener** ಸಿಂಡಿಕೇಟ್ ಬ್ಯಾಂಕ್

15. ಶ್ರೀಮತಿ ಜೆ.ಕೆ.ಮೀನಾಕ್ಷಮ್ಮ, ಶ್ರೀ ಗೋಕುಲ ನಾರಾಯಣಸ್ವಾಮಿ, ಸದಸ್ಯರುಗಳು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ (ವಿಶೇಷ ಆಹ್ವಾನಿತರು)

16. ಶ್ರೀ ಸರ್ಫ್ರರೋಜ್ ಖಾನ್ ಜಂಟಿ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

17. ಡಾ.ಹೆಚ್.ನಟರಾಜ್, ಕಾರ್ಯದರ್ಶಿ,ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳಆಯೋಗ

18. ಶ್ರೀ ಈ. ನಿತ್ಯಾನಂದ ಕುಮಾರ್ ಎ.ಸಿ. B.W.S.S.B

19. ಶ್ರೀ ಗುರುಮೂರ್ತಿ ಜಂಟಿ ನಿರ್ದೇಶಕರು ವಾರ್ತಾ ಮತ್ತು ಪ್ರಚಾರ ಇಲಾಖೆ

20. ಶ್ರೀ ಡಾ.ಆರ್.ಬಾನುಮೂರ್ತಿ ಉಪ ನಿರ್ದೇಶಕರು (ಮೆಡಿಕಲ್)

ದಿನಾಂಕ 20/06/2017 ರಂದು ನಡೆದ ರಾಜ್ಯ ಮೇಲ್ವಿಚಾರಣಾ ಸಮಿತಿ ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳನ್ನು ಸಫಾಯಿ ಕರ್ಮಚಾರಿಗಳ ಆಯೋಗದ ಕಾರ್ಯದರ್ಶಿಗಳು ಸ್ವಾಗತಿಸಿದರು.

1. ದಿನಾಂಕ 14-12-2016ರ ರಾಜ್ಯ ಮೇಲ್ವಿಚಾರಣಾ ಸಮಿತಿ ಸಭೆಯ ನಡವಳಿಯ ಮೇಲೆ ವಿವಿಧ ಇಲಾಖೆಗಳು ಕೈಗೊಂಡಿರುವ ಕ್ರಮಗಳ ಅನುಪಾಲನಾ ವರದಿಯನ್ನು ಅನುಮೋದಿಸಲಾಯಿತು.
2. ಗ್ರಾಮೀಣ ಭಾಗದಲ್ಲಿ ಗುರುತಿಸಲ್ಪಟ್ಟ 474 ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಪುನರ್ವಸತಿ ಕಲ್ಪಿಸುವ ಬಗ್ಗೆ.

   ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ 2016 ರಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ ನಡೆಸಿ ಜಿಲ್ಲೆವಾರು 474 ಜನರನ್ನು ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳೆಂದು ಗುರುತಿಸಿರುತ್ತಾರೆ. ಸದರಿ ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಪುನರ್ವಸತಿಯನ್ನು ಕಲ್ಪಿಸಿಕೊಡಬೇಕಾಗುತ್ತದೆ.

**<u>ತೀರ್ಮಾನ:-</u> ಗುರುತಿಸಲ್ಪಟ್ಟ 474 ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಮಲ ಹೊರುವ ವೃತ್ತಿ ನಿಷೇದ ಮತ್ತು ಅವರ ಪುನರ್ವಸತಿ ಅಧಿನಿಯಮ 2013 ಕಲಂ 13 ರ ಅನ್ವಯ ಪ್ರಸ್ತಾಪಿಸಿರುವ ಪುನರ್ವಸತಿ ಯನ್ನು ಕಲ್ಪಿಸಿಕೊಡುವುದು.**

**ಕ್ರಮ ವ್ಯವಸ್ಥಾಪಕ ನಿರ್ದೇಶಕರು ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ**

3. <u>ನಗರ ಪ್ರದೇಶಗಳಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ ಪೂರ್ಣಗೊಳಿಸಿರುವ ಬಗ್ಗೆ.</u>

ಸಭೆಯಲ್ಲಿ ಹಾಜರಿದ್ದ ಪೌರಾಡಳಿತ ಇಲಾಖೆಯ ನಿರ್ದೇಶಕರು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಈಗಾಗಲೇ ಸಮೀಕ್ಷಾ ಕಾರ್ಯ ಕೈಗೊಳ್ಳುವಂತೆ ನಿರ್ದೇಶನ ನೀಡಲಾಗಿದೆ. ವರದಿಯನ್ನು ಸದ್ಯದಲ್ಲಿಯೇ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ರಾಜ್ಯ ಮೇಲ್ವಿಚಾರಣಾ ಸಮಿತಿಯ ಸದಸ್ಯರಾದ ಶ್ರೀ ರಾಮಚಂದ್ರರವರು ಗ್ರಾಮೀಣ ಪ್ರದೇಶದಲ್ಲಿ ಸಮೀಕ್ಷೆ ಕೈಗೊಂಡಿದ್ದು, 474 ಜನರನ್ನು ಗುರುತಿಸಲಾಗಿದೆ ಆದರೆ ನಗರ ಸ್ಥಳೀಯ ಸಂಸ್ಥೆಗಳಲ್ಲಿ 302 ಜನರನ್ನು ಈ ಹಿಂದೆ ಗುರುತಿಸಿರುವುದು ನಿಖರತೆಯಿಂದ ಕೂಡಿರುವುದಿಲ್ಲವೆಂದು ಮತ್ತು ಮರು ಸಮೀಕ್ಷೆ ಅವಶ್ಯವಿದ್ದು, ತ್ವರಿತಗತಿಯಲ್ಲಿ ಸಮೀಕ್ಷಾ ಕಾರ್ಯ ಪೂರ್ಣಗೊಳಿಸಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಪ್ರಸ್ತಾಪಿಸಿದರು.

ನಿರ್ದೇಶಕರು ಪೌರಾಡಳಿತ ಇಲಾಖೆರವರು ಆದಷ್ಟು ಬೇಗನೆ ಸಮೀಕ್ಷೆ ಕಾರ್ಯ ಪೂರ್ಣಗೊಳಿಸಿ ವರದಿ ನೀಡಲು ಅಗತ್ಯ ಕ್ರಮಕೈಗೊಳ್ಳುವುದಾಗಿ ತಿಳಿಸಿದರು.

**<u>ತೀರ್ಮಾನ:-</u> ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆಯನ್ನು ತುರ್ತಾಗಿ ಪೂರ್ಣಗೊಳಿಸಿ ವರದಿಯನ್ನು ಸರ್ಕಾರಕ್ಕೆ ಒಂದು ತಿಂಗಳೊಳಗಾಗಿ ಸಲ್ಲಿಸುವಂತೆ ತಿಳಿಸಲಾಯಿತು.**

**ಕ್ರಮ:- ನಿರ್ದೇಶಕರು, ಪೌರಾಡಳಿತ ಇಲಾಖೆ, ಬೆಂಗಳೂರು**

4. **ನೈರ್ಮಲ್ಯ ರಹಿತ ಶೌಚಾಲಯಗಳನ್ನು ನೈರ್ಮಲ್ಯ ಶೌಚಾಲಯಗಳಾಗಿ ಪರಿವರ್ತಿಸಿರುವ ಬಗ್ಗೆ.**

ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ನೈರ್ಮಲ್ಯ ರಹಿತ ಶೌಚಾಲಯಗಳನ್ನು ಈಗಾಗಲೇ ನೈರ್ಮಲ್ಯ ಶೌಚಾಲಯಗಳಾಗಿ ಪರಿವರ್ತಿಸಲು ಕ್ರಮಕೈಗೊಳ್ಳಲಾಗಿದೆ. ನೈರ್ಮಲ್ಯ ರಹಿತ ಶೌಚಾಲಯಗಳನ್ನು ನೈರ್ಮಲ್ಯ ಶೌಚಾಲಯಗಳಾಗಿ ಪರಿವರ್ತಿಸಲು ಪ್ರತಿಯೊಂದು ಮನೆಗೆ ರೂ.15000/- ಗಳಂತೆ ಮಂಜೂರು ಮಾಡಲಾಗುತ್ತಿದೆ.

ಅಮೃತ ಯೋಜನೆಯಡಿ ರೂ.22.50 ಕೋಟಿ ಅನುದಾನದಲ್ಲಿ UGD ಸಂಪರ್ಕ ಕಲ್ಪಿಸಲು ಕ್ರಮಕೈಗೊಳ್ಳಲಾಗುತ್ತದೆಯೆಂದು ಸಭೆಗೆ ಪೌರಾಡಳಿತ ಇಲಾಖೆಯ ನಿರ್ದೇಶಕರು ತಿಳಿಸಿದರು.

ಈ ಸಂಬಂಧ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗರವರು ಮಾತನಾಡುತ್ತ ಎಂ.ಎಸ್. ಕಾಯ್ದೆ 2013 ಸೆಕ್ಷನ್ 4ರ ಪ್ರಕಾರ ಈ ಕಾಯ್ದೆ ಜಾರಿಗೆ ಬಂದ 2 ತಿಂಗಳೊಳಗೆ ಇನ್‌ಸ್ಯಾನಿಟರಿ ಲೆಟ್ರಿನ್‌ಗಳ ಸಮೀಕ್ಷೆ ನಡೆಸಬೇಕು ಮತ್ತು ನಂತರ ಶೌಚಾಲಯಗಳ ಪಟ್ಟಿಯನ್ನು ಪ್ರಕಟಿಸಬೇಕು, ಪ್ರಕಟಿತ ಶೌಚಾಲಯ ಪಟ್ಟಿಯಂತೆ ಅನುಬೋಗದಾರರಿಗೆ 15 ದಿವಸದೊಳಗೆ ನೋಟಿಸು ನೀಡಿ ಅಧಿನಿಯಮ ಜಾರಿಗೆ ಬಂದ ದಿನಾಂಕದಿಂದ 6 ತಿಂಗಳೊಳಗೆ ಇನ್‌ಸ್ಯಾನಿಟರಿ ಲೆಟ್ರಿನ್‌ಗಳನ್ನು ನೆಲಸಮ ಮಾಡಬೇಕು ಅಥವಾ ಅವುಗಳನ್ನು ಸ್ಯಾನಿಟರಿ ಲೆಟ್ರಿನ್‌ಗಳಾಗಿ ಪರಿವರ್ತಿಸಲು ತಿಳಿಸಬೇಕಾಗಿರುತ್ತದೆ. ಅನಿವಾರ್ಯ ಸಂದರ್ಭಗಳಲ್ಲಿ ಯುಕ್ತಕಾರಣ ದಾಖಲಿಸಿ 3 ತಿಂಗಳು ಮಿರದಂತೆ ವಿಸ್ತರಿಸಲು ಅವಕಾಶವಿರುತ್ತದೆ. 9 ತಿಂಗಳು ಮೀರದ ಅವಧಿಯಲ್ಲಿ ಎಲ್ಲೆಲ್ಲಿ ಇನ್‌ಸ್ಯಾನಿಟರಿ ಲೆಟ್ರಿನ್‌ಗಳು ಕಂಡು ಬಂದಿದೆಯೋ ಅಂತಹ ಸ್ಥಳಗಳಲ್ಲಿ ಅಗತ್ಯವಾಗಿ ನೈರ್ಮಲ್ಯ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು. 9 ತಿಂಗಳು ಮೀರಿದ ನಂತರ ಅನುಬೋಗದಾರರಿಗೆ 21 ದಿವಸ ನೋಟಿಸು ನೀಡಿ ನೆಲಸಮ ಅಥವಾ ಮಾರ್ಪಾಡಿಸಲು ಕ್ರಮ ವಹಿಸಬೇಕಾಗಿರುತ್ತದೆ. ಈ ಸಂಬಂಧ ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳು ಕಾಯ್ದೆ ಪ್ರಕಾರ ಕಾಯ್ದೆ ಜಾರಿಗೆ ಬಂದ 9 ತಿಂಗಳೊಳಗೆ ಇನ್‌ಸ್ಯಾನಿಟರಿ ಲೆಟ್ರಿನ್‌ಗಳನ್ನು ನೆಲಸಮ ಮಾಡಬೇಕು ಅಥವಾ ಅವುಗಳನ್ನು ಸ್ಯಾನಿಟರಿ ಲೆಟ್ರಿನ್‌ಗಳಾಗಿ ಪರಿವರ್ತಿಸಲು ಕ್ರಮ ವಹಿಸಬೇಕಾಗಿರುತ್ತದೆ. ಈವರೆಗೆ ಕ್ರಮವಹಿಸದಿರುವುದು ಎಂ.ಎಸ್ ಕಾಯ್ದೆ ಸೆಕ್ಷನ್ 5 ಮತ್ತು 6ರ ಉಲ್ಲಂಘನೆಯಾಗಿರುತ್ತದೆ. ಈ ಸಂಬಂಧ 5 ಮತ್ತು 6ರ ಪ್ರಕರಣದ ಉಲ್ಲಂಘನೆಗಾಗಿ ಯಾರೇ ವ್ಯಕ್ತಿಯು ಮೊದಲ ಸಲ ಉಲ್ಲಂಘಿಸುವುದಕ್ಕಾಗಿ 1 ವರ್ಷದ ಅವಧಿಯಲ್ಲಿ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ 50,000 ರೂ ಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆ ಅಥವಾ ಇವರೆಡದಿಂದಲೂ ಮತ್ತು ತರುವಾಯದ ಉಲ್ಲಂಘನೆಗಾಗಿ 2 ವರ್ಷಗಳವರೆಗೆ ವಿಸ್ತರಿಸಬಹುದಾದ ಕಾರಾವಾಸ ಅಥವಾ 1 ಲಕ್ಷ

ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಇವೆರಡರಿಂದಲೂ ದಂಡಿತನಾಗತಕ್ಕದ್ದು ಪ್ರಕಾರ ಕ್ರಮ ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

**ತೀರ್ಮಾನ:-**

- ಎಂ.ಎಸ್. ಕಾಯ್ದೆ ಸೆಕ್ಷನ್ 4ರ ಪ್ರಕಾರ ಇನ್‌ಸ್ಯಾನಿಟರಿ ಲೆಟ್ರಿನ್‌ಗಳನ್ನು ಸಮೀಕ್ಷೆ ಮಾಡಿ, ಶೌಚಾಲಯ ಪಟ್ಟಿ ಪ್ರಕಟಿಸಿ 2 ತಿಂಗಳೊಳಗೆ ಇನ್‌ಸ್ಯಾನಿಟರಿ ಲೆಟ್ರಿನ್‌ಗಳನ್ನು ಸ್ಯಾನಿಟರಿ ಲೆಟ್ರಿನ್‌ಗಳನ್ನಾಗಿ ಪರಿವರ್ತಿಸಲು ಕ್ರಮ ಕೈಗೊಳ್ಳುವುದು.
- ಪ್ರತಿ ಮನೆಗೆ ಶೌಚಾಲಯ, ಸಮುದಾಯ ಶೌಚಾಲಯ, ಸಾರ್ವಜನಿಕ ಶೌಚಾಲಯಗಳ ನಿರ್ಮಾಣ ಮತ್ತು ಇನ್‌ಸ್ಯಾನಿಟರಿ ಲೆಟ್ರಿನ್‌ಗಳನ್ನು ಸ್ಯಾನಿಟರಿ ಲೆಟ್ರಿನ್‌ಗಳನ್ನಾಗಿ ಮಾರ್ಪಾಡಿಸಲು ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಒದಗಿಸಿರುವ ಅನುದಾನವನ್ನು ಬಳಸಿಕೊಂಡು ಕಡ್ಡಾಯವಾಗಿ 2 ತಿಂಗಳೊಳಗಾಗಿ ನೈರ್ಮಲ್ಯ ಶೌಚಾಲಯಗಳನ್ನು ನಿರ್ಮಾಣ ಮಾಡಲು ಕ್ರಮ ವಹಿಸುವುದು.
- ಈ ಬಗ್ಗೆ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ವ್ಯಾಪಕ ಪ್ರಚಾರ ಮತ್ತು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ನಿರ್ದೇಶನ ನೀಡುವುದು.

(ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ. ನಿರ್ದೇಶಕರು, ಪೌರಾಡಳಿತ ಇಲಾಖೆ)

5. <u>ಸಮುದಾಯ ಮತ್ತು ವೈಯಕ್ತಿಕ ಶೌಚಾಲಯಗಳನ್ನು ನಿರ್ಮಿಸಿರುವ ಬಗ್ಗೆ.</u>

ಪ್ರತಿ ಮನೆಗಳಲ್ಲಿ ನೈರ್ಮಲ್ಯ ಶೌಚಾಲಯ ನಿರ್ಮಾಣಕ್ಕಾಗಿ ಸ್ಥಳಾವಕಾಶದ ಅಭಾವವಿದ್ದಲ್ಲಿ ಅಂತಹ ಕಡೆಗಳಲ್ಲಿ ಸಮುದಾಯ ಶೌಚಾಲಯಗಳ ನಿರ್ಮಾಣಕ್ಕೆ ಕ್ರಮಕೈಗೊಳ್ಳಲಾಗುತ್ತಿದೆ.

ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ವೃತ್ತಿ ನಿಷೇಧ ಮತ್ತು ಪುನರ್ವಸತಿ ಅಧಿನಿಯಮ 2013 ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳುತ್ತಿರುವುದಿಲ್ಲ. ತಮ್ಮ ಅಧೀನ ಅಧಿಕಾರಿಗಳಿಗೆ ಈ ಅಧಿನಿಯಮದ ಬಗ್ಗೆ ಹೆಚ್ಚಿನ ಅರಿವು ಮೂಡಿಸಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ನಿರ್ದೇಶಿಸಲು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಸದಸ್ಯರಾದ ಶ್ರೀ ಗೋಕುಲ ನಾರಾಯಣ ಸ್ವಾಮಿರವರು ತಿಳಿಸಿದರು. ಮುಂದುವರೆದು, ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ತೆರೆದ ಗುಂಡಿಗಳ ವ್ಯವಸ್ಥೆ ಇನ್ನು ಅಸ್ಥಿತ್ವದಲ್ಲಿರುತ್ತದೆ. ತುಮಕೂರು ಜಿಲ್ಲೆಯಲ್ಲೂ ಯು.ಜಿ.ಡಿ. ಸಂಪರ್ಕವನ್ನು ನೇರವಾಗಿ ಚರಂಡಿಗಳಿಗೆ ಕಲ್ಪಿಸಲಾಗಿದೆ. ಈ ಎಲ್ಲಾ ನ್ಯೂನ್ಯತೆಗಳನ್ನು ಸರಿಪಡಿಸುವಂತೆ ತಿಳಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನಲ್ಲಿ ಶೌಚಾಲಯಗಳ ನಿರ್ಮಾಣಕ್ಕಾಗಿ ವೈಜ್ಞಾನಿಕ ಮತ್ತು ತಾಂತ್ರಿಕತೆಯುಳ್ಳ ತಂತ್ರಜ್ಞಾನವನ್ನು ಅಳವಡಿಸಿಕೊಂಡಿದ್ದು, ಅದೇ ಮಾದರಿಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ವಿಸ್ತರಿಸಬಹುದಾಗಿದೆ. ಸಮಿತಿಯ ಸದಸ್ಯರು ಒಮ್ಮೆ ಭೇಟಿ ನೀಡಿ ಪರಿಶೀಲಿಸಬಹುದಾಗಿರುತ್ತದೆ ಎಂಬುದಾಗಿ ಪೌರಾಡಳಿತ ಇಲಾಖೆಯ ನಿರ್ದೇಶಕರು ಉತ್ತರಿಸಿದರು.

**ತೀರ್ಮಾನ:- ನೈರ್ಮಲ್ಯರಹಿತ ಶೌಚಾಲಯಗಳನ್ನು ಗುರುತಿಸಿ ಅಂತಹ ಕಡೆಗಳಲ್ಲಿ ಕಡ್ಡಾಯವಾಗಿ ಸಮುದಾಯ ಶೌಚಾಲಯಗಳನ್ನು ಒಂದು ತಿಂಗಳೊಳಗಾಗಿ ನಿರ್ಮಿಸಲು ಕ್ರಮ ವಹಿಸುವಂತೆ ನಿರ್ದೇಶಿಸಲಾಗಿತ್ತು**

**ಕ್ರಮ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ. ನಿರ್ದೇಶಕರು, ಪೌರಾಡಳಿತ ಇಲಾಖೆ**

6. **ಸರ್ಕಾರದ ಆದೇಶ ಸಂಖ್ಯೆ ನಅಇ 74 ಎಂಡಬ್ಲ್ಯೂಪಿ 2015 ಬೆಂಗಳೂರು, ದಿನಾಂಕ:21.11.2015 ಆದೇಶದಂತೆ ಕರ್ನಾಟಕ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಬರುವ ಒಳಚರಂಡಿ, ತೆರೆದ ಗುಂಡಿ ಮತ್ತು ಶೌಚಾಲಯ ಗುಂಡಿಗಳನ್ನು ಮ್ಯಾನ್ಯುಯಲ್ ಸ್ಕಾವೆಂಜಿಂಗ್ ಪದ್ಧತಿಯಲ್ಲಿ ಸ್ವಚ್ಛಗೊಳಿಸುವಾಗ ಮೃತಪಟ್ಟ ಪೌರಕಾರ್ಮಿಕರ ಕುಟುಂಬದ ಅವಲಂಬಿತರಿಗೆ ನೀಡಲಾಗುತ್ತಿರುವ ಪರಿಹಾರ ಮೊತ್ತವನ್ನು 5.00 ಲಕ್ಷಗಳಿಂದ 10 ಲಕ್ಷಗಳಿಗೆ ಪರಿಷ್ಕರಿಸಿರುವಂತೆ ಪರಿಹಾರ ಧನವನ್ನು ವಿತರಿಸುವ ಬಗ್ಗೆ ಹಾಗೂ ಸರ್ಕಾರಿ ಆದೇಶ ಸಂಖ್ಯೆ: ನಅಇ 10 ಎಂಡಬ್ಲ್ಯೂಪಿ 2012 ದಿನಾಂಕ:19.06.2016ರ ಆದೇಶದನ್ವಯ 1993ರ ನಂತರ ಮೃತಪಟ್ಟ ಪೌರಕಾರ್ಮಿಕರ ಅವಲಂಬಿತ ಕುಟುಂಬಗಳಿಗೆ ಈಗಾಗಲೇ 5 ಲಕ್ಷ ಪರಿಹಾರ ನೀಡಿದ ಪ್ರಕರಣಗಳಲ್ಲಿ ಪರಿಷ್ಕೃತ ಪರಿಹಾರ ಮೊತ್ತದ ಶೇಷಾಂಶವನ್ನು ಪಾವತಿಸಲು ಕ್ರಮ ವಹಿಸಿರುವ ಬಗ್ಗೆ (ಕೆಳಕಂಡ ಅನುಬಂಧದಲ್ಲಿ ಮಾಹಿತಿ ನೀಡಲು ಕೋರಿದೆ.)**

ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮೃತಪಟ್ಟಿರುವ 15 ಪ್ರಕರಣಗಳಲ್ಲಿ 34 ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಮೃತಪಟ್ಟಿರುತ್ತಾರೆ. 32 ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಕುಟುಂಬದ ಅವಲಂಭಿತರಿಗೆ ಸರ್ವೋಚ್ಛ ನ್ಯಾಯಾಲಯದ ತೀರ್ಪಿನಂತೆ ರೂ.10.00 ಲಕ್ಷಗಳ ಪರಿಹಾರ ಧನ ನೀಡಲಾಗಿರುತ್ತದೆ. ಬಾಕಿ ಉಳಿದ 2 ಪ್ರಕರಣಗಳನ್ನು ಮಂಜೂರು ಮಾಡಲು ಪರಿಶೀಲನೆ ಮಾಡಿದ್ದು, ಆ ಎರಡು ಪ್ರಕರಣಗಳು ಮ್ಯಾನ್‌ಹೋಲ್ ಸ್ವಚ್ಛಗೊಳಿಸುವಾಗ ಮೃತಪಟ್ಟದ್ದಾಗಿರುವುದಿಲ್ಲ ಆದ ಕಾರಣ ಪರಿಹಾರ ಧನ ಮಂಜೂರು ಮಾಡಲು ಅವಕಾಶವಿರುವುದಿಲ್ಲವೆಂದು ನಿರ್ದೇಶಕರು ಪೌರಾಡಳಿತ ಇಲಾಖೆಯವರು ಉತ್ತರ ನೀಡಿರುತ್ತಾರೆ. ಇದಕ್ಕೆ ಪ್ರತಿಕ್ರಿಯಿಸಿದ ಕರ್ನಾಟಕ ರಾಜ್ಯ

ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರು ಸದರಿ ಎರಡು ಪ್ರಕರಣಗಳನ್ನು ಆಯೋಗದಲ್ಲಿ ಸ್ವಯಂ ಪ್ರೇರಿತವಾಗಿ ದಾಖಲಿಸಿಕೊಂಡು ವಿಚಾರಣೆಯನ್ನು ನಡೆಸಲಾಗುತ್ತಿದೆ. ವಿಚಾರಣಾ ಸಂದರ್ಭದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳ ಸಮಿತಿಯನ್ನು ರಚಿಸಿ ವರದಿಯನ್ನು ಪಡೆಯಲಾಗಿದೆ. ಸದರಿ ವರದಿಯಲ್ಲಿ ಮೃತಪಟ್ಟ ನೌಕರರು ಮ್ಯಾನ್‌ಹೋಲ್ ಸ್ವಚ್ಛಗೊಳಿಸುವ ಸಂಧರ್ಭದಲ್ಲಿ ವಿಷಾನಿಲ ಸೇವನೆಯಿಂದ ಮೃತಪಟ್ಟಿರುವುದು ದೃಡಪಟ್ಟಿರುತ್ತದೆ. ಆದಕಾರಣ ಮೃತಪಟ್ಟ ನೌಕರರ ಅವಲಂಭಿತ ಕುಟುಂಬದವರಿಗೆ ಸರ್ವೋಚ್ಛ ನ್ಯಾಯಾಲಯದ ತೀರ್ಪಿನಂತೆ ರೂ.10.00 ಲಕ್ಷಗಳ ಪರಿಹಾರ ಧನವನ್ನು ಮಂಜೂರು ಮಾಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶಿಸಲಾಯಿತು. ನಿರ್ದೇಶಕರು ಪೌರಾಡಳಿತ ನಿರ್ದೇಶನಾಲಯ ರವರು ಮತ್ತೊಮ್ಮೆ ಪರಿಶೀಲಿಸಿ ಅಗತ್ಯಕ್ರಮ ಕೈಗೊಳ್ಳುವುದಾಗಿ ಉತ್ತರಿಸಿದರು.

ಬಿ.ಬಿ.ಎಂ.ಪಿ, ಜಲಮಂಡಳಿ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ಮ್ಯಾನ್‌ಹೋಲ್ ಸ್ವಚ್ಛಗೊಳಿಸುವ ಸಂದರ್ಭದಲ್ಲಿ ಮೃತಪಟ್ಟ ನೌಕರರ ಕುಟುಂಬದ ಅವಲಂಭಿತರಿಗೆ ಇದುವರೆವಿಗೂ ಪರಿಹಾರ ಧನ ಪಾವತಿಯಾಗದ ಪ್ರಕರಣಗಳನ್ನು ಸಫಾಯಿ ಕರ್ಮಚಾರಿಗಳ ಆಯೋಗದಲ್ಲಿ ಸ್ವಯಂಪ್ರೇರಿತವಾಗಿ ದಾಖಲಿಸಿಕೊಂಡು ವಿಚಾರಣೆಯನ್ನು ನಡೆಸಲಾಗುತ್ತಿದ್ದು, ಸದರಿ ಪ್ರಕರಣಗಳಿಗೆ ಸರ್ವೋಚ್ಛ ನ್ಯಾಯಾಲಯದ ತೀರ್ಪಿನನ್ವಯ ರೂ.10.00 ಲಕ್ಷಗಳ ಪರಿಹಾರ ಧನವನ್ನು ನೀಡುವಂತೆ ನಿರ್ದೇಶನ ನೀಡಲಾಯಿತು. 1993 ರ ನಂತೆ ಮೃತಪಟ್ಟ ನೌಕರರಿಗೆ ಇದುವರೆವಿಗೂ ಪರಿಹಾರ ಧನ ವಿತರಿಸದೇ ಇರುವುದು ವಿಷಾಧನೀಯ ಸಂಗತಿಯಾಗಿರುತ್ತದೆ. ಸರ್ವೋಚ್ಛ ನ್ಯಾಯಾಲಯದ ತೀರ್ಪಿನಲ್ಲಿ ಮೃತಪಟ್ಟ ಕಾರ್ಮಿಕರ ಕುಟುಂಬದಸವರನ್ನು ಕೂಡಲೇ ಗುರುತಿಸಿ ಅವರಿಗೆ ಪರಿಹಾರಧನ ನೀಡತಕ್ಕದ್ದು ಎಂಬುದಾಗಿ ತಿಳಿಸಲಾಗಿದೆ.

ಬಿ.ಬಿ.ಎಂ.ಪಿ, ಜಲಮಂಡಳಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರು ಮ್ಯಾನ್‌ಹೋಲ್ ಸ್ವಚ್ಛಗೊಳಿಸುವ ಸಂದರ್ಭದಲ್ಲಿ ಮೃತಪಟ್ಟ ನೌಕರರ ಕುಟುಂಬದ ಅವಲಂಭಿತರಿಗೆ ಇದುವರೆವಿಗೂ ಪರಿಹಾರ ಧನ ಪಾವತಿ ಮಾಡದೇ ಇರುವುದು ಸರ್ವೋಚ್ಛ ನ್ಯಾಯಾಲಯದ ತೀರ್ಪನ್ನು ಉಲ್ಲಂಘಿಸಿದಂತಾಗುತ್ತದೆ. ಆದಕಾರಣ ಸರ್ವೋಚ್ಛ ನ್ಯಾಯಾಲಯದ ತೀರ್ಪನ್ನು ಉಲ್ಲಂಘಿಸದೇ ತುರ್ತಾಗಿ ಮೃತರ ಕುಟುಂಬದವರನ್ನು ಗುರುತಿಸಿ ಪರಿಹಾರಧನವನ್ನು ಮಂಜೂರು ಮಾಡುವಂತೆ ತಿಳಿಸಿದರು. ಇದಕ್ಕೆ ಸಮ್ಮತಿಸುತ್ತಾ, ಸಂಬಂಧಪಟ್ಟ ಇಲಾಖೆಯವರು ತುರ್ತಾಗಿ ಪರಿಹಾರ ಧನ ನೀಡುವುದಾಗಿ ಸಭೆಗೆ ತಿಳಿಸಿದರು.

**ತೀರ್ಮಾನ:-** ಮಾನ್ಯ ಅಧ್ಯಕ್ಷರು ಮ್ಯಾನ್ ಹೋಲ್ ಪ್ರಕರಣಗಳಲ್ಲಿ ಮೃತಪಟ್ಟ ಕಾರ್ಮಿಕರಿಗೆ ರೂ.10 ಲಕ್ಷಗಳ ಪರಿಹಾರ ಧನವನ್ನು ಮಂಜೂರು ಮಾಡುವಂತೆ ಸರ್ವೋಚ್ಚ ನ್ಯಾಯಾಲಯವು 2014 ರಲ್ಲಿ ಆದೇಶಿಸಿದೆ ಅದರ ಅನ್ವಯ ಸರ್ಕಾರಿ ಆದೇಶ ಸಂಖ್ಯೆ: ನಅಇ 10 ಎಂಡಬ್ಲ್ಯೂಪಿ 2012 ದಿನಾಂಕ: 19.06.2012 ರ ಆದೇಶದಂತೆ 1993ರ ನಂತರ ಮ್ಯಾನ್ ಹೋಲ್ ಪ್ರಕರಣಗಳಲ್ಲಿ ಮೃತಪಟ್ಟ ಕುಟುಂಬದವರಿಗೆ ರೂ.10.00 ಲಕ್ಷಗಳ ಪರಿಹಾರ ಧನವನ್ನು ಮಂಜೂರು ಮಾಡಬೇಕಾಗಿರುತ್ತದೆ. ಆದಕಾರಣ ಅಂತಹ ಕುಟುಂಬದವರನ್ನು ಗುರುತಿಸಿ ಈಗಾಗಲೇ ರೂ.5.00 ಲಕ್ಷಗಳನ್ನು ಪಾವತಿಸಿದ್ದಲ್ಲಿ, ಬಾಕಿ ರೂ.5.00 ಲಕ್ಷಗಳನ್ನು ಕೂಡಲೇ ನೀಡುವಂತೆ ಹಾಗೂ ಪರಿಹಾರ ಧನ ನೀಡದಂತಹ ಪ್ರಕರಣಗಳಲ್ಲಿ ಪೂರ್ಣವಾಗಿ ನೀಡುವ ಬಗ್ಗೆ ಸಂಬಂಧಪಟ್ಟ ಇಲಾಖೆಗಳು ಸರ್ವೋಚ್ಚ ನ್ಯಾಯಾಲಯದ ತೀರ್ಪನ್ನು ಉಲ್ಲಂಘಿಸದೇ ತುರ್ತಾಗಿ ಅಗತ್ಯ ಕ್ರಮ ವಹಿಸುವಂತೆ ಸೂಚನೆ ನೀಡಲಾಯಿತು.

**ಕ್ರಮ:- ಪೌರಾಡಳಿತ / ನಗರಾಭಿವೃದ್ಧಿ / ಬಿ.ಬಿ.ಎಂ.ಪಿ / ಜಲಮಂಡಳಿ/ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ**

7. ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಮ್ಯಾನ್‌ಹೋಲ್‌ನಲ್ಲಿ ಕಾರ್ಯನಿರ್ವಹಿಸುವಾಗ ಮೃತಪಟ್ಟ ನೌಕರರ ಅವಲಂಭಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಕಲ್ಪಿಸುವ ಬಗ್ಗೆ.

ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಮ್ಯಾನ್‌ಹೋಲ್‌ನಲ್ಲಿ ಕಾರ್ಯನಿರ್ವಹಿಸುವಾಗ ಮೃತಪಟ್ಟ ನೌಕರರ ಅವಲಂಭಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಕಲ್ಪಿಸುವ ಬಗ್ಗೆ ಸಮಾಜ ಕಲ್ಯಾಣ ಇಲಾಖೆಯ ಮೂಲಕ ನಗರಾಭಿವೃದ್ಧಿ ಇಲಾಖೆಗೆ ಸಲ್ಲಿಸಿದ್ದು, ಈ ಬಗ್ಗೆ ಕೈಗೊಂಡಿರುವ ಕ್ರಮ ಹಾಗೂ ಪ್ರಸ್ತುತ ಹಂತದ ಬಗ್ಗೆ ಪ್ರಸ್ತಾಪಿಸಲಾಯಿತು.

ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿಗಳು ಪ್ರಸ್ತಾವನೆಯು ಪರಿಶೀಲನೆ ಹಂತದಲ್ಲಿರುತ್ತದೆಂದು ಉತ್ತರಿಸಿದರು.

2000 ದಿಂದ ಇಂತಹ ಪ್ರಕರಣಗಳು ನಡೆದಿದ್ದು, ಇದುವರೆವಿಗೂ ಅಂತಹ ಕುಟುಂಬದವರನ್ನು ಗುರುತಿಸದೇ ಅವಲಂಬಿತರು ಜೀವನ ನಡೆಸಲು ಕಷ್ಟ ಅನುಭವಿಸುತ್ತಿರುವುದು

ನಮ್ಮ ಜಿಲ್ಲಾ ಪ್ರಗತಿ ಪರಿಶೀಲನಾ ಹಂತದಲ್ಲಿ ಗಮನಕ್ಕೆ ಬಂದಿರುತ್ತದೆ. ಆದಕಾರಣ ಅಂತಹವರನ್ನು ಗುರುತಿಸಿ, ಕೂಡಲೇ ಅನುಕಂಪದ ಆಧಾರದ ಮೇಲೆ ನೇಮಕಾತಿ ಕಲ್ಪಿಸಲು ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು.

ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ದಿನಾಂಕ.14-12-2016 ರಂದು ನಡೆದ ರಾಜ್ಯ ಮೇಲ್ವಿಚಾರಣ ಸಮಿತಿಯಲ್ಲಿ ಮೃತ ವ್ಯಕ್ತಿಯ ಕುಟುಂಬದ ಅವಲಂಬಿತ ಸದಸ್ಯರಿಗೆ ಅನುಕಂಪದ ಆಧಾರದ ಮೇಲೆ ಪುರಸಭೆ/ ನಗರ ಸಭೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ಕುಟುಂಬದವರಿಗೆ ವಂಶವೃಕ್ಷದ ಮಾಹಿತಿಯನ್ನು ಪಡೆದು ನೇಮಕ ಮಾಡಿಕೊಳ್ಳಲು ಸೂಕ್ತ ಆದೇಶ ಹೊರಡಿಸುವಂತೆ ನಗರಾಭಿವೃದ್ಧಿ ಸಚಿವರಿಗೆ ಕೋರಲಾಗಿದೆ. ಅದರಂತೆ ತುರ್ತಾಗಿ ಸರ್ಕಾರಿ ಆದೇಶ ಹೊರಡಿಸಿ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚನೆ ನೀಡಲಾಯಿತು.

**<u>ತೀರ್ಮಾನ:-</u> ಮೃತ ವ್ಯಕ್ತಿಯ ಕುಟುಂಬದ ಅವಲಂಬಿತ ಸದಸ್ಯರಿಗೆ ಅನುಕಂಪದ ಆಧಾರದ ಮೇಲೆ ಪುರಸಭೆ/ ನಗರ ಸಭೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ಕುಟುಂಬದವರಿಗೆ ವಂಶವೃಕ್ಷದ ಮಾಹಿತಿಯನ್ನು ಪಡೆದು ನೇಮಕ ಮಾಡಿಕೊಳ್ಳಲು ನಗರಾಭಿವೃದ್ಧಿ ಇಲಾಖೆಯಿಂದ ಸೂಕ್ತ ಆದೇಶ ಹೊರಡಿಸುವಂತೆ ಕ್ರಮ ಕೈಗೊಳ್ಳಲು ನಿರ್ದೇಶಿಸಲಾಯಿತು.**

**ಕ್ರಮ:- ಅಪರ ಮುಖ್ಯ ಕಾರ್ಯದರ್ಶಿಗಳು, ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ**

**8. <u>ಮ್ಯಾನ್‌ಹೋಲ್ ಸ್ವಚ್ಛಗೊಳಿಸುವಾಗ ದಾಖಲಾಗಿರುವ ಪ್ರಕರಣಗಳ ಬಗ್ಗೆ ಕಾನೂನು ಕ್ರಮ ಕೈಗೊಂಡಿರುವ ಹಾಗೂ ಶಿಕ್ಷೆ ಆಗಿರುವ, ಪ್ರಕರಣಗಳ ವಿಚಾರಣಾ ಹಂತಗಳ ಬಗ್ಗೆ.</u>**

ಗೃಹ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಮ್ಯಾನ್‌ಹೋಲ್ ಸ್ವಚ್ಛಗೊಳಿಸುವಾಗ ದಾಖಲಾಗಿರುವ ಪ್ರಕರಣಗಳ ಬಗ್ಗೆ ಕಾನೂನು ಕ್ರಮ ಕೈಗೊಂಡಿರುವ ಹಾಗೂ ಶಿಕ್ಷೆ ಆಗಿರುವ, ಪ್ರಕರಣಗಳ ವಿಚಾರಣಾ ಹಂತಗಳ ಬಗ್ಗೆ ಅಧೀನ ಕಛೇರಿಗಳಿಂದ ಮಾಹಿತಿಯನ್ನು ಪಡೆಯಲಾಗುತ್ತಿದೆ. ಸಂಪೂರ್ಣ ಮಾಹಿತಿ ಬಂದ ನಂತರ ನಿಯಮಾನುಸಾರ ಕಾನೂನು ರೀತ್ಯ ಕ್ರಮ ಕೈಗೊಂಡು ವಿಚಾರಣಾ ಹಂತಗಳ ಬಗ್ಗೆ ವರದಿಯನ್ನು ಸಲ್ಲಿಸಲಾಗುವುದೆಂದು ಸಭೆಗೆ ಉತ್ತರಿಸಿದರು.

ಈ ಕುರಿತು ಸಮಾಜ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳು, ರಾಷ್ಟ್ರೀಯ ಸಫಾಯಿ ಕರ್ಮಚಾರಿಗಳ ಆಯೋಗದಿಂದ 1993 ರ ನಂತರದಿಂದ ಮ್ಯಾನ್ ಹೋಲ್ ಸ್ವಚ್ಛತಾ ಕೆಲಸ

ನಿರ್ವಹಿಸುವ ಸಂದರ್ಭದಲ್ಲಿ ಮೃತಪಟ್ಟ ಕಾರ್ಮಿಕರಿಗೆ ಸರ್ವೋಚ್ಛ ನ್ಯಾಯಾಲಯದ ತೀರ್ಪಿನನ್ವಯ ರೂ.10.00 ಲಕ್ಷಗಳ ಪರಿಹಾರ ಧನ ವಿತರಿಸಿರುವ ಬಗ್ಗೆ ಹಾಗೂ ಈ ಪ್ರಕರಣಕ್ಕೆ ಕಾರಣರಾದ ಅಧಿಕಾರಿಗಳ / ಸಿಬ್ಬಂದಿಗಳ ವಿರುದ್ಧ ಕೈಗೊಂಡಿರುವ ಕಾನೂನು ರೀತ್ಯಾ ಕ್ರಮಗಳ ಬಗ್ಗೆ ವರದಿಯನ್ನು ನೀಡುವಂತೆ ಆಗಿಂದಾಗ್ಗೆ ಪತ್ರಗಳು ಸ್ವೀಕೃತಗೊಳ್ಳುತ್ತಿರುತ್ತವೆ. ರಾಷ್ಟ್ರೀಯ ಸಫಾಯಿ ಕರ್ಮಚಾರಿಗಳ ಆಯೋಗಕ್ಕೆ ಸಮಾಜ ಕಲ್ಯಾಣ ಇಲಾಖೆಯ ಮೂಲಕ ಉತ್ತರಿಸಬೇಕಾಗಿರುವುದರಿಂದ ಆದ್ಯತೆಯ ಮೇರೆಗೆ ಸಂಬಂಧಪಟ್ಟ ಅಧೀನ ಅಧಿಕಾರಿಗಳಿಂದ ಮಾಹಿತಿಯನ್ನು ಪಡೆದು ಕ್ರೂಡೀಕೃತ ವರದಿಯನ್ನು ಒಂದು ತಿಂಗಳೊಳಗಾಗಿ ಕಳುಹಿಸುವಂತೆ ತಿಳಿಸಿದರು.

**<u>ತೀರ್ಮಾನ:-</u> ಮ್ಯಾನ್ಯೂಯಲ್ ಸ್ಕ್ಯಾವೆಂಜಿಂಗ್ ವೃತ್ತಿ ನಿಷೇದ ಮತ್ತು ಪುನರ್ವಸತಿ ಅಧಿನಿಯಮ 2013 ಕಲಂ 8ರಲ್ಲಿ Whoever contravenes the provision of section 5 & 6 shall for the first contravention funishable with imprisonment for a term which may extend to one year or with fine which may extend to Rs.50,000-00 or with both, and for any subsequent contravention with imprisonment which may extend to two years or with fine which may extend to Rs.1,00,000-00 or with both.**

**ಕಲಂ 8 ರಲ್ಲಿ whoever contravenes the provision of section 7 shall for the first contravention funishable with imprisonment for a term which may extend to two years or with fine which may extend to Rs.2,00,000-00 or with both, and for any subsequent contravention with imprisonment which may extend to five years or with fine which may extend to Rs.5,00,000-00 or with both.**

**ಕಲಂ 22 ರಲ್ಲಿ Not withstanding anything cantained in the Code of Criminal Proceedure, 1973, every offence under this act shall be cognizable and Non- bailable.** ಎಂದು ಉಲ್ಲೇಖಿಸಲಾಗಿದೆ. ಆದಕಾರಣ ಉಲ್ಲೇಖಿಸಿರುವ ಕಲಂಗಳನ್ವಯ ಬೆಳಕಿಗೆ ಬಂದಿರುವ ಪ್ರಕರಣಗಳ ಕುರಿತಂತೆ ಅಗತ್ಯ ಕ್ರಮ ಕೈಗೊಂಡು, ಕೇಂದ್ರ ಸರ್ಕಾರಕ್ಕೆ ವರದಿ ನೀಡಬೇಕಾಗಿರುವುದರಿಂದ ಒಂದು ತಿಂಗಳೊಳಗಾಗಿ ವರದಿಯನ್ನು ಕಳುಹಿಸುವಂತೆ ತೀರ್ಮಾನಿಸಲಾಯಿತು.

ಕ್ರಮ: ಪ್ರಧಾನ ಕಾರ್ಯದರ್ಶಿಗಳು, ಗೃಹ ಇಲಾಖೆ

9. ಮ್ಯಾನ್‌ಹೋಲ್ ಸ್ವಚ್ಛಗೊಳಿಸುವಾಗ ಸಂಭವಿಸುವ ಸಾವುಗಳನ್ನು ತಡೆಯುವ ಬಗ್ಗೆ Manhole Cleaning Task Force (MCTF) ರಚಿಸುವ ಬಗ್ಗೆ ಹಾಗೂ ಜಾಗೃತಿ ಮೂಡಿಸುವ ಬಗ್ಗೆ.

ಯಾವುದೇ ಸ್ಥಳಗಳಲ್ಲಿ ಮ್ಯಾನ್‌ಹೋಲ್ ಭರ್ತಿಯಾಗಿ ಕಟ್ಟಿಕೊಂಡ ಸಂದರ್ಭದಲ್ಲಿ ಸ್ವಚ್ಛಗೊಳಿಸಲು ಇದಕ್ಕೆಂದೇ ವಿಶೇಷವಾಗಿ Manhole Cleaning Task Force (MCTF) ತರಬೇತಿ ಹೊಂದಿದವರನ್ನು ನಿಯೋಜಿಸುವುದರ ಮೂಲಕ ಸಾವುಗಳನ್ನು ತಡೆಯಬಹುದಾಗಿರುತ್ತದೆ. ಉದಾ: ಯಾವುದೇ ಸ್ಥಳದಲ್ಲಿ ಬೆಂಕಿ ಅವಘಡಗಳು ಸಂಭವಿಸಿದಲ್ಲಿ ಅಗ್ನಿಶಾಮಕ ದಳದವರಿಗೆ ದೂರವಾಣಿ ಮಾಡಿ ಅವರಿಂದಲೇ ಬೆಂಕಿಯನ್ನು ನಂದಿಸುವ ಕ್ರಮವನ್ನು ಅನುಸರಿಸುವಂತೆ ಮ್ಯಾನ್‌ಹೋಲ್ ಸ್ವಚ್ಛಗೊಳಿಸುವ ಸಂದರ್ಭಕ್ಕೆ Manhole Cleaning Task Force (MCTF) ರಚಿಸಿ ಕಾರ್ಯನಿರ್ವಹಿಸುವ ಕಾರ್ಮಿಕರಿಗೆ ತರಬೇತಿಯನ್ನು ನೀಡುವ ಬಗ್ಗೆ ಜಾಗೃತಿಯನ್ನು ಮೂಡಿಸುವುದರಿಂದ ಸಾವುಗಳನ್ನು ತಡೆಯಬಹುದೆಂದು ಆಯೋಗದ ಅಧ್ಯಕ್ಷರು ಸಭೆಗೆ ತಿಳಿಸಿದರು.

ಇದಕ್ಕೆ ಪ್ರತಿಕ್ರಯಿಸಿದ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳು ಬಹಳ ಅತ್ಯುತ್ತಮ ಸಲಹೆಯಾಗಿದ್ದು, ಈ ಪದ್ಧತಿಯನ್ನು ಅನುಸರಿಸಿದ್ದಲ್ಲಿ ಈಗ ಸಂಭವಿಸುತ್ತಿರುವ ಸಾವುಗಳನ್ನು ತಡೆಯುವುದನ್ನು ಸಂಶಯವಿಲ್ಲ ಆದಕಾರಣ ಈ ಸಲಹೆಯನ್ನು ಸ್ವಾಗತಿಸುವುದಾಗಿ ಹಾಗೂ ಸಂಬಂಧಪಟ್ಟಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

**ತೀರ್ಮಾನ:–ಮ್ಯಾನ್ ಹೋಲ್ ಸ್ವಚ್ಛತಾ ಕಾರ್ಯವನ್ನು ತರಬೇತಿ ಹೊಂದಿದ ಅತ್ಯುತ್ತಮ ತಂತ್ರ ಜ್ಞಾನವನ್ನು ಅಳವಡಿಸಿಕೊಂಡ Manhole Cleaning Task Force (MCTF)ಅನ್ನು ಕಡ್ಡಾಯವಾಗಿ ಬಳಸಿಕೊಳ್ಳಲು ಯೋಜನೆಯನ್ನು ಜಾರಿಗೆ**

**ತರಲು ಬಿ.ಡಬ್ಲ್ಯೂಎಸ್ಎಸ್‌ಬಿ. ಪೌರಾಡಳಿತ ನಿರ್ದೇಶನಾಲಯ ಮತ್ತು ನಗರಾಭಿವೃದ್ಧಿ ಇಲಾಖೆ, ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ರವರು ಸಮನ್ವಯ ಮಾಡಿಕೊಂಡು Manhole Cleaning Task Force (MCTF) ಯೋಜನೆಯನ್ನು ರೂಪಿಸುವುದು.**

**ಕ್ರಮ: ಬಿ.ಡಬ್ಲ್ಯೂಎಸ್ಎಸ್‌ಬಿ. ನಗರಾಭಿವೃದ್ಧಿ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,**

**10. ನಗರ ಪ್ರದೇಶಗಳಲ್ಲಿ ಗುರುತಿಸಲ್ಪಟ್ಟ 302 ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಪೈಕಿ ಪುನರ್ವಸತಿ ಕಲ್ಪಿಸಲು ಫಲಾನುಭವಿಗಳ ವಿಳಾಸ ದೊರೆಯದೇ ಇರುವವರ ಬಗ್ಗೆ ಕೈಗೊಂಡ ಕ್ರಮ.**

ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದಲ್ಲಿ ನಗರ ಪ್ರದೇಶಗಳಲ್ಲಿ ಗುರುತಿಸಲ್ಪಟ್ಟ 302 ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಪೈಕಿ 226 ಜನರಿಗೆ ಪುನರ್ವಸತಿ ಕಲ್ಪಿಸಿದ್ದು, ಕೇಂದ್ರದಲ್ಲಿ ಅನುದಾನ ಬಿಡುಗಡೆಗೆ ಬಾಕಿ ಇರುವ 70 ಜನರ ಮಾಹಿತಿಯನ್ನು ಹಾಗೂ ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ 6 ಜನರಿಗೆ ಅನುದಾನ ಮಂಜೂರಾತಿಗೆ ಬಾಕಿ ಇರುತ್ತದೆ ಸದರಿ ವಿಳಾಸ ದೊರೆಯದೇ ಬಾಕಿ ಇರುವ ಫಲಾನುಭವಿಗಳ ಬಗ್ಗೆ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದಲ್ಲಿ ಏರ್ಪಡಿಸಿದ್ದ ಸಭೆಯಲ್ಲಿ ತೀರ್ಮಾನಿಸಿದಂತೆ ಒಂದು ಸಮಿತಿಯನ್ನು ರಚಿಸಿ, ಸಮಿತಿಯು ಪಂಚನಾಮೆ ಮಾಡಿ ಫಲಾನುಭವಿಗಳು ಇಲ್ಲವೆಂದು ದೃಡೀಕರಿಸಿ ಸಲ್ಲಿಸಿದ ಫಲಾನುಭವಿಗಳ ಹೆಸರನ್ನು ಪಟ್ಟಿಯಿಂದ ಕೈಬಿಡಲು ಕ್ರಮಕೈಗೊಳ್ಳಲಾಗುತ್ತಿದೆ ಎಂದು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಸಭೆಗೆ ತಿಳಿಸಿದರು.

**ತೀರ್ಮಾನ:-** **ಈ ಹಿಂದೆ ತೀರ್ಮಾನಿಸಿದಂತೆ ಒಂದು ಸಮಿತಿಯನ್ನು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಅಧಿಕಾರಿಗಳು ಮತ್ತು ಸ್ವಯಂ ಸೇವಾಕರ್ತರನ್ನು ಒಳಗೊಂಡಂತೆ ಒಂದು ಸಮಿತಿಯನ್ನು ರಚಿಸಿ, ಗುರುತಿಸಲ್ಪಟ್ಟ ಮ್ಯಾನ್ಯೂಯಲ್ ಸ್ಕ್ಯಾವೆಂಜರ್‌ಗಳ ಮಾಹಿತಿ ಲಭ್ಯವಿಲ್ಲದವರನ್ನು ಪಟ್ಟಿಯಿಂದ ಕೈಬಿಟ್ಟು ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವುದು.**

ಕ್ರಮ –ನಿರ್ದೇಶಕರು, ಪೌರಾಡಳಿತ ಇಲಾಖೆ, ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

11. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅಪಾರ್ಟ್‌ಮೆಂಟ್‌ಗಳು, ಮಾಲ್‌ಗಳು, ವಿಲ್ಲಾಗಳ ಸಂಖ್ಯೆ ಮತ್ತು ಸದರಿ ಪ್ರದೇಶಗಳಲ್ಲಿ ಮ್ಯಾನ್‌ಹೋಲ್ ಮತ್ತು ಸೆಪ್ಟಿಕ್ ಟ್ಯಾಂಕ್‌ಗಳ ನಿರ್ವಹಣೆ ಬಗ್ಗೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಅಧಿಕಾರಿಗಳು ಮಾಹಿತಿಯನ್ನು ಸಲ್ಲಿಸುವಂತೆ ನಿರ್ದೇಶಿಸಲಾಯಿತು.

**ತೀರ್ಮಾನ:–** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅಪಾರ್ಟ್‌ಮೆಂಟ್‌ಗಳು, ಮಾಲ್‌ಗಳು, ವಿಲ್ಲಾಗಳ ಸಂಖ್ಯೆ ಮತ್ತು ಸದರಿ ಪ್ರದೇಶಗಳಲ್ಲಿ ಮ್ಯಾನ್‌ಹೋಲ್ ಮತ್ತು ಸೆಪ್ಟಿಕ್ ಟ್ಯಾಂಕ್‌ಗಳ ನಿರ್ವಹಣೆ ವಿವರವನ್ನು 15 ದಿನಗಳೊಳಗಾಗಿ ಒದಗಿಸುವಂತೆ ನಿರ್ದೇಶಿಸ ಲಾಯಿತು.

ಕ್ರಮ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ. ಬಿ.ಡಬ್ಲ್ಯೂಎಸ್‌ಎಸ್‌ಬಿ.

12. <u>ಖಾಸಗಿ ಅಪಾರ್ಟ್‌ಮೆಂಟ್‌ಗಳು, ಮಾಲ್‌ಗಳು ಮತ್ತು ವಿಲ್ಲಾಗಳ ಮ್ಯಾನ್‌ಹೋಲ್ ಮತ್ತು ಸೆಪ್ಟಿಕ್ ಟ್ಯಾಂಕ್‌ಗಳನ್ನು ಸ್ವಚ್ಛಗೊಳಿಸುವಾಗ ಮೃತಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ರವರ ಕುಟುಂಬದ ಅವಲಂಬಿತರಿಗೆ ಪರಿಹಾರ ಧನ ವಿತರಿಸುವ ಬಗ್ಗೆ.</u>

ಮ್ಯಾನ್‌ಹೋಲ್ ಸ್ವಚ್ಛಗೊಳಿಸುವಾಗ ಮೃತಪಟ್ಟಂತಹ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಕುಟುಂಬದ ಅವಲಂಭಿತರಿಗೆ ಸರ್ವೋಚ್ಛ ನ್ಯಾಯಾಲಯದ ತೀರ್ಪಿನ ಅನ್ವಯ ರೂ.10.00 ಲಕ್ಷಗಳನ್ನು ಪಾವತಿಸುವ ಬಗ್ಗೆ ಗೊಂದಲವಿದ್ದು, ಪಾವತಿಯು ತಮ್ಮ ವ್ಯಾಪ್ತಿಗೆ ಬರುವುದಿಲ್ಲವೆಂದು ಬಿಬಿಎಂಪಿ ರವರು ಉತ್ತರಿಸಿ ಪರಿಹಾರಧನ ಪಾವತಿಸದೇ ಇರುವುದು ಹಲವಾರು ಪ್ರಕರಣಗಳಲ್ಲಿ ಕಂಡು ಬಂದಿರುತ್ತದೆ. ಇದೇ ಮಾದರಿಯಲ್ಲಿ ಒಳಚರಂಡಿ ಮತ್ತು ನೀರು ಸರಬರಾಜು, ಬೆಂಗಳೂರು ರವರೂ ಸಹ ತಿಳಿಸಿ ಹಲವಾರು ಪ್ರಕರಣಗಳಲ್ಲಿ ಪರಿಹಾರಧನ ಪಾವತಿಸದೇ ಇರುವುದು ಸ್ಪಷ್ಟವಾಗಿ ಕಂಡು ಬಂದಿರುತ್ತದೆ.

ಈ ಸಂಬಂಧ ಕೇಂದ್ರ ಸರ್ಕಾರವು Do Letter No. 19016/46/2014-SCD-1V (SRMS) Dated: 10th June 2016 of Joint Secretary Ministry of Social Justice and Empowerment New Dehli Stated that "The purport and effect of the directions contained in paragraph 23.3 of the order dated 27-03-2014 is clear and would apply to all victims irrespective of the place of work. ಸ್ಪಷ್ಟೀಕರಣ ನೀಡಿರುತ್ತದೆ. ಸದರಿ ಸ್ಪಷ್ಟೀಕರಣದನ್ವಯ ಖಾಸಗಿ ಅಪಾರ್ಟ್‌ಮೆಂಟ್‌ಗಳು, ಮಾಲ್‌ಗಳು ಮತ್ತು ವಿಲ್ಲಾಗಳ ಮ್ಯಾನ್‌ಹೋಲ್ ಮತ್ತು ಸೆಪ್ಟಿಕ್ ಟ್ಯಾಂಕ್‌ಗಳನ್ನು ಸ್ವಚ್ಛಗೊಳಿಸುವಾಗ ಮೃತಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ರವರ ಕುಟುಂಬದ ಅವಲಂಬಿತರಿಗೆ ಪರಿಹಾರ ಧನ ವಿತರಿಸಲು ಕ್ರಮಕೈಗೊಳ್ಳುವಂತೆ ನಿರ್ದೇಶನ ನೀಡಲಾಯಿತು.

**ತೀರ್ಮಾನ: ಖಾಸಗಿ ಅಪಾರ್ಟ್‌ಮೆಂಟ್‌ಗಳು, ಮಾಲ್‌ಗಳು ಮತ್ತು ವಿಲ್ಲಾಗಳ ಮ್ಯಾನ್‌ಹೋಲ್ ಮತ್ತು ಸೆಪ್ಟಿಕ್ ಟ್ಯಾಂಕ್‌ಗಳನ್ನು ಸ್ವಚ್ಛಗೊಳಿಸುವಾಗ ಮೃತಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ರವರ ಕುಟುಂಬದ ಅವಲಂಬಿತರಿಗೆ ಪರಿಹಾರ ಧನ ವಿತರಿಸಲು ಕೇಂದ್ರ ಸರ್ಕಾರದ ಅರೆ ಸರ್ಕಾರಿ ಪತ್ರದ ಸ್ಪಷ್ಟೀಕರಣದಂತೆ ಎಲ್ಲಾ ಸಂಬಂಧಪಟ್ಟ ಇಲಾಖೆಗಳು ಕ್ರಮ ಕೈಗೊಳ್ಳಲು ನಿರ್ದೇಶಿಸಲಾಯಿತು.**

**ಕ್ರಮ:- ಪೌರಾಡಳಿತ / ನಗರಾಭಿವೃದ್ಧಿ / ಬಿ.ಬಿ.ಎಂ.ಪಿ / ಜಲಮಂಡಳಿ**

13. <u>ಮ್ಯಾನ್‌ಹೋಲ್ ದುರಂತಗಳನ್ನು ತಡೆಯುವ ಬಗ್ಗೆ ಕೈಗೊಳ್ಳಬೇಕಾದ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಬಗ್ಗೆ.</u>

ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದಿಂದ ಜಿಲ್ಲಾ ಮತ್ತು ಕಂದಾಯ ವಿಭಾಗೀಯ ಮಟ್ಟದಲ್ಲಿ ಮ್ಯಾನ್‌ಹೋಲ್ ದುರಂತಗಳನ್ನು ತಡೆಯುವ ಸಂಬಂಧ, ವಿವಿಧ ಇಲಾಖಾ ಸಹಯೋಗದೊಂದಿಗೆ ಕಾರ್ಮಿಕರಿಗೆ, ಅಧಿಕಾರಿಗಳಿಗೆ ಅರಿವು ಮೂಡಿಸುವ ಸಂಬಂಧ ಕಾರ್ಯಾಗಾರವನ್ನು ಏರ್ಪಡಿಸಲು ಅನುಕ್ರಮವಾಗಿ ರೂ.1.00 ಲಕ್ಷ ಮತ್ತು ರೂ. 5.00 ಲಕ್ಷಗಳನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳು ಮತ್ತು ಸಮಾಜ ಕಲ್ಯಾಣ ಇಲಾಖೆಯ ಜಂಟಿ/ಉಪ ನಿರ್ದೇಶಕರ ಜಂಟಿ ಖಾತೆಗೆ ಜಮೆ ಮಾಡಲಾಗಿದೆ.

ಜಿಲ್ಲಾ ಮಟ್ಟದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ/ಉಪ ನಿರ್ದೇಶಕರು, ಉಪ ವಿಭಾಗದ ಮಟ್ಟದಲ್ಲಿ ಸಹಾಯಕ ನಿರ್ದೇಶಕರನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ.

ಆಯೋಗದಿಂದ 2017–18ನೇ ಸಾಲಿನ ವಾರ್ಷಿಕ ಕ್ಯಾಲೆಂಡರ್ ಮೂಲಕ, ಬ್ರೋಚರ್, ನೋಟ್ ಪ್ಯಾಡ್‌ಗಳನ್ನು ಮುದ್ರಿಸಿ ಪ್ರಚುರಗೊಳಿಸಲಾಗಿದೆ.

ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಮತ್ತು ರಾಜಕೀಯ ಸ್ಥಿತಿ–ಗತಿಗಳ ಬಗ್ಗೆ ಪ್ರತಿಷ್ಠಿತ ಸಂಸ್ಥೆಯಾದ National Law School of India University ಯಿಂದ ಸಂಶೋಧನೆಯನ್ನು ಕೈಗೊಳ್ಳಲಾಗುತ್ತಿದೆ.

ಪ್ರಖ್ಯಾತ ಕಲಾವಿದರನ್ನು ಒಳಗೊಂಡಂತೆ 60 ನಿಮಿಷದ ಒಂದು ಸಾಕ್ಷಚಿತ್ರವನ್ನು ನಿರ್ಮಾಣ ಮಾಡುವುದರ ಮೂಲಕ ಅರಿವು ಮೂಡಿಸಲು ಕ್ರಮಕೈಗೊಳ್ಳಲಾಗುತ್ತಿದೆ.

ಈ ಎಲ್ಲಾ ಅಂಶಗಳನ್ನು ಸಭೆಯಲ್ಲಿ ವಿವರಿಸಿ ವಿವಿಧ ಇಲಾಖೆಯವರು ಅರಿವು ಮೂಡಿಸುವ ಸಂಬಂಧ ಕೈಗೊಂಡಿರುವ ಕ್ರಮವನ್ನು ವಿವರಿಸುವಂತೆ ಕೋರಲಾಗಿ ನಿರ್ದೇಶಕರು, ಪೌರಾಡಳಿತ ಇಲಾಖೆಯವರು ತಮ್ಮ ಇಲಾಖೆಯಿಂದಲೂ ಸಹ ಅರಿವು ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದಾಗಿ ಸಭೆಗೆ ತಿಳಿಸಿದರು.

**ತೀರ್ಮಾನ:– ಮ್ಯಾನ್ಯೂಯಲ್ ಸ್ಕ್ಯಾವೆಂಜಿಂಗ್ ವೃತ್ತಿ ನಿಷೇದ ಮತ್ತು ಪುನರ್ವಸತಿ ಅಧಿನಿಯಮ 2013 ಅನ್ನು ಕಡ್ಡಾಯವಾಗಿ ಪರಿಣಾಮಕಾರಿಯಾಗಿ ಅನುಷ್ಟಾನಗೊಳಿಸಲು ಕಾರ್ಮಿಕರಿಗೆ ಅರಿವು ಮೂಡಿಸುವ ಕಾರ್ಯಾಗಾರವನ್ನು ಹಮ್ಮಿಕೊಳ್ಳುವ ಸಂಬಂಧ ತಮ್ಮ ಅಧೀನ ಅಧಿಕಾರಿಗಳಿಗೆ ಸೂಚನೆ ನೀಡಲು ನಿರ್ದೇಶನ ನೀಡಲಾಯಿತು.**

**ಕ್ರಮ_ ಬಿಬಿಎಂಪಿ ಆಯುಕ್ತರು, ಪೌರಾಡಳಿತ ಇಲಾಖಾ ನಿರ್ದೇಶಕರು, ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.**

ಸಭೆಯಲ್ಲಿ ಹಾಜರಿದ್ದು, ತಮ್ಮ ಅಭಿಪ್ರಾಯ /ಸಲಹೆ ಹಾಗೂ ಸೂಚನೆಗಳನ್ನು ನೀಡಿದ ಹಾಗೂ ಪಡೆದ ವಿವಿಧ ಇಲಾಖೆಗಳ ಎಲ್ಲಾ ಅಧಿಕಾರಿ, ರಾಷ್ಟ್ರೀಯ ಸಫಾಯಿ ಕರ್ಮಚಾರಿಗಳ ಆಯೋಗದ ಸದಸ್ಯರು ಹಾಗೂ ಅಧ್ಯಕ್ಷರು, ಸದಸ್ಯರು ಮತ್ತು ಮೇಲ್ವಿಚಾರಣ ಸಮಿತಿಯ ಸದಸ್ಯರು ಇವರಿಗೆ ಸರ್ಕಾರದ ಕಾರ್ಯದರ್ಶಿಗಳು, ಸಫಾಯಿ ಕರ್ಮಚಾರಿಗಳ ಆಯೋಗ ರವರು ವಂದನಾರ್ಪಣೆ ಮಾಡುತ್ತಾ, ಸಭೆಯನ್ನು ಮುಕ್ತಾಯಗೊಳಿಸಿದರು.

ಪಿ.ಮಣಿವಣ್ಣನ್ ಭಾ.ಆ.ಸೇ
ಸದಸ್ಯ ಕಾರ್ಯದರ್ಶಿ
ರಾಜ್ಯ ಮೇಲ್ವಿಚಾರಣಾ ಸಮಿತಿ
ಮತ್ತು ಸರ್ಕಾರದ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ

ಹೆಚ್.ಆಂಜನೇಯ
ಸನ್ಮಾನ್ಯ ಅಧ್ಯಕ್ಷರು ರಾಜ್ಯ ಮೇಲ್ವಿಚಾರಣಾ ಸಮಿತಿ
ಮತ್ತು ಸಚಿವರು, ಸಮಾಜ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.